# ತರಬೇತಿ ಕಾರ್ಯಕ್ರಮದ ಷರತ್ತು/ನಿಬಂಧನೆಗಳು

1. ಅರ್ಜಿಗಳನ್ನು ಇಲಾಖೆಯ ವೆಬ್‌ಸೈಟ್ www.horticulture.kar.nic.in ನಲ್ಲಿ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದೃಢೀಕರಣ, ಸರ್ಟಿಫಿಕೇಟ್ ಮತ್ತು **2 ಕಲರ್ ಪಾಸಪೋರ್ಟ್‌ಸೈಜ್ ಪೋಟೊಗಳ** ಸಹಿತವಾಗಿ ದಿನಾಂಕ: 24–04–2017 ರೊಳಗೆ ಆಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರು, (ಜಿ.ಪಂ) ಇವರ ಕಛೇರಿಗೆ ಸಲ್ಲಿಸಬೇಕು.
2. ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವಾಗ ಅರ್ಜಿ ಶುಲ್ಕದ ಬಾಬ್ತು **ಸಾಮಾನ್ಯ ಅಭ್ಯರ್ಥಿಗಳಿಗೆ ರೂ.30/– ಮತ್ತು ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ರೂ.15/–ಗಳನ್ನು** ನಿಗದಿಪಡಿಸಲಾಗಿದ್ದು, ಈ ಮೊತ್ತವನ್ನು ಇಂಡಿಯನ್ ಪೋಸ್ಟಲ್ ಆರ್ಡರ್ (IPO)/ ಡಿಮ್ಯಾಂಡ್ ಡ್ರಾಫ್ಟ್ (DD) ರೂಪದಲ್ಲಿ ಆಯಾಯ ಜಿಲ್ಲೆಗಳ ತೋಟಗಾರಿಕೆ ಉಪ ನಿರ್ದೇಶಕರು (ಜಿಪಂ) ರವರ ಹೆಸರಿನಲ್ಲಿ ಪಡೆದು, ಅರ್ಜಿಯ ಜೊತೆಗೆ ಲಗತ್ತಿಸಬೇಕು.
3. **ವಿದ್ಯಾರ್ಹತೆ:** ಕನ್ನಡ ವಿಷಯಗಳೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು.
4. ಈ ತರಬೇತಿಗೆ ಸಂಬಂಧಪಟ್ಟ ಎಲ್ಲಾ ವಿಷಯಗಳನ್ನು ಕನ್ನಡದಲ್ಲಿ ಮಾತ್ರ ಹೇಳಲಾಗುವುದು. ಆದ್ದರಿಂದ ಅಭ್ಯರ್ಥಿಯು ಕನ್ನಡ ಓದುವುದು, ಬರೆಯುವುದು ಹಾಗೂ ಮಾತನಾಡುವುದನ್ನು ತಿಳಿದಿರಬೇಕು.
5. **ವಯೋಮಿತಿ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 33 ವರ್ಷ ಮತ್ತು ಇತರರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 30 ವರ್ಷ.
6. ಈ ತರಬೇತಿಯು ರೈತರ ಮಕ್ಕಳಿಗಾಗಿ ಇರುವುದರಿಂದ ಅಭ್ಯರ್ಥಿಯ ತಂದೆ ಅಥವಾ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು. ಈ ಬಗ್ಗೆ ಪಹಣಿಯನ್ನು ನೀಡುವುದು ಕಡ್ಡಾಯವಾಗಿರುತ್ತದೆ. ಅಭ್ಯರ್ಥಿಗಳು ತೋಟದ ಕೆಲಸಗಳನ್ನು ಮಾಡುವಷ್ಟು ದೃಢಕಾಯರಾಗಿರಬೇಕು.
7. ತಮ್ಮ ಸ್ವಂತ ತೋಟಗಳನ್ನು ಅಭಿವೃದ್ಧಿಪಡಿಸಬೇಕೆಂಬ ಅಭಿಲಾಷೆಯುಳ್ಳ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.
8. ಅರ್ಜಿಯಲ್ಲಿ ಕೇಳಿರುವ ಎಲ್ಲಾ ವಿಷಯಗಳಿಗೂ ಪೂರ್ಣವಾದ ಮತ್ತು ಸರಿಯಾದ ವಿವರಣೆಯನ್ನು ಕೊಡಬೇಕು. 3ನೇ, 7ನೇ ಮತ್ತು 8ನೇ ಕಾಲಂಗಳಿಗೆ ಅಗತ್ಯವಾಗಿ ಬೇಕಾದ ಸರ್ಟಿಫಿಕೇಟ್‌ಗಳನ್ನು ಲಗತ್ತಿಸಬೇಕು. ಇಲ್ಲದಿದ್ದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು.
9. ಈ ತರಬೇತಿಯ ಕಾಲಾವಧಿ 10 ತಿಂಗಳು. ತರಬೇತಿಯು ದಿನಾಂಕ: 02–05–2017 ರಿಂದ ಪ್ರಾರಂಭವಾಗಿ 28–02–2018ಕ್ಕೆ ಅಂತ್ಯಗೊಳ್ಳುವುದು.
10. **ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ರೂ.1,000/–ಗಳ ಮಾಸಿಕ ಶಿಷ್ಯವೇತನ ನೀಡಲಾಗುವುದು.**

ಪು.ತಿ.ನೋ

11. ಪ್ರತಿ ವಿದ್ಯಾರ್ಥಿಯೂ ತಮ್ಮ ಸ್ವಂತ ಖರ್ಚಿನಲ್ಲಿ ಎರಡು ಜೊತೆ ಹಸಿರು ಬಣ್ಣದ ಸಮವಸ್ತ್ರಗಳನ್ನು ಹೊಲಿಸಿಕೊಂಡು ತರಬೇತಿ ಸಮಯದಲ್ಲಿ ಕಡ್ಡಾಯವಾಗಿ ಧರಿಸಿಕೊಳ್ಳಬೇಕು.

**12.** ಅಂತಿಮ ಪರೀಕ್ಷೆಗೆ ಕುಳಿತುಕೊಳ್ಳಲು ಕನಿಷ್ಟ ಶೇಕಡ 75% ರಷ್ಟು ಹಾಜರಾತಿ ಇರಲೇಬೇಕು **(ವೈದ್ಯಕೀಯ ಆಧಾರದ ಮೇಲೆ ಗರಿಷ್ಠ 30 ದಿನಗಳು ವಿನಾಯಿತಿ ಪಡೆಯಬಹುದು)**.

13. ತರಬೇತಿ ಸಮಯದಲ್ಲಿ ಯಾವುದೇ ವಿದ್ಯಾರ್ಥಿಯಲ್ಲಿ ಅಶಿಸ್ತು, ದುರ್ನಡತೆಗಳು, ದುಶ್ಚಟಗಳು (ಮಧ್ಯಪಾನ, ಧೂಮಪಾನ, ಇತ್ಯಾದಿ) ಕಂಡುಬಂದಲ್ಲಿ ಯಾವುದೇ ರೀತಿಯ ಸಮಜಾಯಿಷಿಯನ್ನು ನೀಡದೇ ತರಬೇತಿಯಿಂದ ಹೊರಗೆ ಹಾಕಲಾಗುವುದು.

14. ಅಭ್ಯರ್ಥಿಯು ತರಬೇತಿಯ ಮಧ್ಯದಲ್ಲಿ ಬಿಟ್ಟು ಹೋದರೆ ಅದುವರೆಗೂ ಪಡೆದಿರುವ ಶಿಷ್ಯ ವೇತನವನ್ನು ಹಿಂದಿರುಗಿಸಬೇಕಾಗುತ್ತದೆ.

15. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳು ಮೊಬೈಲ್ ಪೋನನ್ನು ಬಳಸುವಂತಿಲ್ಲ.

16. ಸರ್ಕಾರದ ಮೀಸಲಾತಿ ನಿಯಮಾವಳಿಗಳನ್ನು ಪಾಲಿಸಿ, ಮೆರಿಟ್ ಆಧಾರದ ಮೇಲೆ ಆಯ್ಕೆ ಪ್ರಕ್ರಿಯೆ ಕೈಗೊಳ್ಳಲಾಗುವುದು.